ಮೀನುಗಾರಿಕೆ ಬಂದರುಗಳ ಅಭಿವೃದ್ಧಿ.

1617(2241) ಶ್ರೀ ಕೆ. ವಿಶ್ವೇಶ್ವರ ಹೆಗಡೆ ಕಾಗೇರಿ (ಅಂಕೋಲ) :— ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಮೀನುಗಾರರಿಗಾಗಿ ಅಭಿವೃದ್ಧಿಪಡಿಸಲಾದ ಬಂದರುಗಳಾವುವು ಅದಕ್ಕೆ ಖರ್ಚು ಮಾಡಿದ ಒಟ್ಟು ಮೊಬಗಲಗೆಷ್ಟು?ಸರ್ಕಾರದವರು ಈ ಬಗ್ಗೆ ಹಾಕಿಕೊಂಡಿರುವ ಮುಂದಿನ ಯೋಜನೆಗಳಾವುವು;

ಆ) ಉತ್ತರ ಕನ್ನಡ ಜಿಲ್ಲೆಯ ಬೇಲೆಕೇರಿ ಬಂದರು ಅಭಿವೃದ್ಧಿಪಡಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು;

ಇ) ಬೇಲೆಕೇರಿ ಬಂದರು ಅಭಿವೃದ್ಧಿಪಡಿಸಲು ವಿದೇಶ ಕಂಪನಿಗೆ ನೀಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಅದನ್ನು ಸಾರ್ವಜನಿಕರಿಗೆ ತಿಳಿಸದೇ ಇರುವುದಕ್ಕೆ ಕಾರಣಗಳೇನು?

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು) :—

ಅ) ಮೀನುಗಾರರಿಗಾಗಿ ಅಭಿವೃದ್ಧಿಪಡಿಸಲಾದ ಬಂದರುಗಳು ಹಾಗೂ ಮಾಡಲಾದ ವೆಚ್ಚ

ಬಂದರಿನ ಹೆಸರು	ಮಾಡಲಾದ ವೆಚ್ಚ
ಅ) ಮಂಗಳೂರು 1ನೇ ಹಂತ	147.00 ಲಕ್ಷ ರೂ.
ಆ) ಮಲ್ಪೆ 1ನೇ ಹಂತ	845.33 ಲಕ್ಷ ರೂ.
ಇ) ಹೊನ್ನಾವರ	120.98 ಲಕ್ಷ ರೂ.
ಈ) ತದಡಿ	1137.88 ಲಕ್ಷ ರೂ.
ಉ) ಕಾರವಾರ	26.00 ಲಕ್ಷ ರೂ.

ಗಂಗೊಳ್ಳಿ ಮೀನುಗಾರಿಕಾ ಬಂದರನ್ನು ರೂ. 832.00 ಲಕ್ಷ ಅಂದಾಜು ವೆಚ್ಚದಲ್ಲಿ ನಿರ್ಮಿಸಲು ಪ್ರಸ್ತಾಪಿಸಲಾಗಿದೆ.

ಆ) ಇಲ್ಲಿ ಮೀನುಗಾರಿಕಾ ಬಂದರು ನಿರ್ಮಾಣ ಮಾಡುವ ಯೋಜನೆ ಇರುವುದಿಲ್ಲ. ಮೀನುಗಾರಿಕಾ ಜಟ್ಟಿ ನಿರ್ಮಾಣವನ್ನು ರೂ. 67.40 ಲಕ್ಷ ವೆಚ್ಚದಲ್ಲಿ ಕೈಗೊಳ್ಳಲಾಗುವುದು

ಇ) ಬೇಲಿಕೇರಿ ಬಂದರನ್ನು ಅಭಿವೃದ್ಧಿಪಡಿಸಲು ವಿದೇಶಿ ಕಂಪನಿಗೆ ನೀಡಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.